ನಿ-72 (117)

ಕರ್ನಾಟಕ ವಿಧಾನ ಪರಿಷತ್ತಿನ ಮಾನ್ಯ ಸದಸ್ಯರಾದ ಶ್ರೀ ಅರುಣ ಶಹಾಪೂರ ಇವರು

ನಿಯಮ-72 ರಡಿಯಲ್ಲಿ ಪ್ರಸ್ತಾಪಿಸಿರುವ ಸೂಚನೆ

ವಿಷಯ

ಖಾಸಗಿ ಅನುದಾನಿತ ಪದವಿ ಕಾಲೇಜುಗಳಲ್ಲಿ ಸೇವೆಯಲ್ಲಿರುವಾಗಲೇ ಮರಣ ಹೊಂದಿದ ಬೋಧಕರ ಹಾಗೂ ಬೋಧಕೇತರರ ಕುಟುಂಬದವರಿಗೆ ಅನುಕಂಪ ಹುದ್ದೆಗಳನ್ನು ಭರ್ತಿ ಮಾಡಿಕೊಳ್ಳುವ/ನೀಡುವ ಕುರಿತು.

ಉತ್ತರ

ಸರ್ಕಾರದ ಪತ್ರ ಸಂಖ್ಯೆ:ಇಡಿ/246/ಯು.ಪಿ.ಸಿ/2001, ದಿನಾಂಕ:01.02.2002ರಲ್ಲಿ ಖಾಸಗಿ ಅನುದಾನಿತ ಶಿಕ್ಷಣ ಸಂಸ್ಥೆಗಳಲ್ಲಿ ಸೇವೆಯಲ್ಲಿದ್ದಾಗ ಮರಣ ಹೊಂದಿದ ನೌಕರನ ಅವಲಂಬಿತರಿಗೆ ಅನುಕಂಪದ ಆಧಾರದ ಮೇಲೆ ನೇಮಕಾತಿ ಮಾಡಲು ಅವಕಾಶವಿರುವುದಿಲ್ಲವೆಂದು ತಿಳಿಸಲಾಗಿದೆ. ಅಲ್ಲದೇ ಸರ್ಕಾರದ ಅಧಿಸೂಚನೆ ಸಂಖ್ಯೆ: ಇಡಿ/551/ಯುಪಿಸಿ/99 ದಿನಾಂಕ:07.08.2003ರಲ್ಲಿ ಹೊರಡಿಸಿರುವ ಕರ್ನಾಟಕ ಶಿಕ್ಷಣ ಸಂಸ್ಥೆಗಳು (ಕಾಲೇಜು ಶಿಕ್ಷಣ) ನಿಯಮಗಳು - 2003 ರ ನಿಯಮ 8(2)ರಲ್ಲಿ " Vacant and unapproved Post of Non-teaching Staff as on 01.03.2001 shall be permanently unaided. Any vacancies in the Non-teaching Post Whichever as arisen after 01.03.2001 on account of retirement, resignation, removai, dismissal and death etc., are to remain permanently unaided. Such Vacancies which are unaided shall be filled by the management and salary and other allowances shall be paid from its own resources" ಎಂದು ತಿಳಿಸಲಾಗಿರುತ್ತದೆ. ಆದ್ದರಿಂದ ಖಾಸಗಿ ಅನುದಾನಿತ ಪದವಿ ಕಾಲೇಜುಗಳಲ್ಲಿ ಖಾಲಿ ಇರುವ ಬೋಧಕೇತರ ಹುದ್ದೆಗಳನ್ನು ಅನುಕಂಪದ ಆಧಾರದ ಮೇಲೆ ಭರ್ತಿ ಮಾಡಲು ಅವಕಾಶವಿರುವುದಿಲ್ಲ.

ಸರ್ಕಾರದ ಪತ್ರ ಸಂಖ್ಯೆ:ಇಡಿ/159/ಯು.ಪಿ.ಸಿ/2015, ದಿನಾಂಕ:08.11.2017ರಲ್ಲಿ ಖಾಸಗಿ ಅನುದಾನಿತ ಪದವಿ ಕಾಲೇಜುಗಳಲ್ಲಿ ಸೇವೆಯಲ್ಲಿರುವಾಗಲೇ ಮರಣ ಹೊಂದಿದ ನೌಕರರ ಅವಲಂಬಿತರಿಗೆ ಅನುಕಂಪದ ಆಧಾರದ ಮೇಲೆ ನೇಮಕಾತಿ ನೀಡುವ ಸಂಬಂಧ ಬಾಕಿ ಇರುವ ಪ್ರಕರಣಗಳ ಮಾಹಿತಿ ಹಾಗೂ ಸದರಿ ನೇಮಕಾತಿಯಿಂದ ಸರ್ಕಾರಕ್ಕೆ ತಗಲುವ ಆರ್ಥಿಕ ಹೊರೆಯ ಬಗ್ಗೆ ಮಾಹಿತಿ ಕೋರಲಾಗಿ, ಆಯುಕ್ತರು, ದಿನಾಂಕ:13.07.2018ರಲ್ಲಿ ಸರ್ಕಾರಕ್ಕೆ ವರದಿ ಸಲ್ಲಿಸಿ, ಒಟ್ಟು-315 ಪ್ರಕರಣಗಳು ಅನುಕಂಪದ ಆಧಾರದ ನೇಮಕಾತಿಗೆ ಬಾಕಿ ಇದ್ದು, ಸದರಿ ಪ್ರಕರಣಗಳನ್ನು ಪರಿಗಣಿಸಿದ್ದಲ್ಲಿ ವಾರ್ಷಿಕ ಅಂದಾಜು ರೂ.10.00 ಕೋಟಿಗಳ ಅರ್ಥಿಕ ಹೊರೆ ಉಂಟಾಗುತ್ತದೆ ಎಂಬ ಮಾಹಿತಿಯನ್ನು ನೀಡಲಾಗಿರುತ್ತದೆ.

ಆದರೆ, ಖಾಸಗಿ ಅನುದಾನಿತ ಪದವಿ ಕಾಲೇಜುಗಳಲ್ಲಿ ದಿನಾಂಕ:01.03.2001ರ ನಂತರ ತೆರವಾಗುವ ಬೋಧಕೇತರರ ಹುದ್ದೆಗಳು ಶಾಶ್ವತವಾಗಿ ಅನುದಾನರಹಿತವೆಂದು ಪರಿಗಣಿಸಲ್ಪಡುವುದರಿಂದ ಅನುದಾನಿತ ಪದವಿ ಕಾಲೇಜುಗಳಲ್ಲಿ ಅನುಕಂಪದ ಆಧಾರದ ಮೇಲೆ ನೇಮಕಾತಿ ಮಾಡಿಕೊಳ್ಳಲು ನಿಯಮಗಳಲ್ಲಿ ಅವಕಾಶವಿರುವುದಿಲ್ಲ.

ಇಡಿ 34 ಯುಪಿಸಿ 2021

(ಡಾ: ಅಶ್ವಥ್ ನಾರಾಯಣ ಸಿ.ಎನ್.)

ಉಪ ಮುಖ್ಯಮಂತ್ರಿಗಳು (ಉನ್ನತ ಶಿಕ್ಷಣ)